**National**
**Kannada**
**23.03.2025 13.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

1. ದಾರ್ಶನಿಕ ನಾಯಕ ಡಾ.ರಾಮ್ ಮನೋಹರ್ ಲೋಹಿಯಾ, ಸ್ವಾತ್ರಂತ್ರ್ಯ ಹೋರಾಟಗಾರರಾದ ಭಗತ್ ಸಿಂಗ್, ಸುಖದೇವ್, ರಾಜ್‌ಗುರು ಅವರಿಗೆ ಪ್ರಧಾನಿ ನರೇಂದ್ರ ಮೋದಿ ಗೌರವ ನಮನ
2. 'ಫಿಟ್ ಇಂಡಿಯಾ' ಅಭಿಯಾನ ಯಾಶಸ್ವಿಗೊಳಿಸಲು ದಿನನಿತ್ಯ ವ್ಯಾಯಾಮ – ಸೈಕ್ಲಿಂಗ್ ಅಳವಡಿಸಿಕೊಳ್ಳಲು ಕೇಂದ್ರ ಸಚಿವ ಡಾ.ಮನ್ಸೂಖ್ ಮಾಂಡವೀಯ ಕರೆ
3. ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ನಡೆಸುವ ಸಿಯುಇಟಿ–ಯುಜಿ 2025 ರ ನೋಂದಣಿ ಅವಧಿ ನಾಳೆವರೆಗೆ ವಿಸ್ತರಣೆ
4. ಫಿಬಾ ಪುರುಷರ ಏಷ್ಯಾಕಪ್–2025ಕ್ಕೆ ಅರ್ಹತೆ ಗಳಿಸಿದ ಭಾರತೀಯ ಬ್ಯಾಸ್ಕೆಟ್ ಬಾಲ್ ತಂಡ,
5. ಐಪಿಎಲ್ ಟಿ–20 ಕ್ರಿಕೆಟ್: ಇಂದು ಸನ್ ರೈಸರ್ಸ್ ಹೈದರಾಬಾದ್ – ರಾಜಸ್ಥಾನ ರಾಯಲ್ಸ್ ಹಾಗೂ ಚೆನ್ನೈ ಸೂಪರ್ ಕಿಂಗ್ಸ್– ಮುಂಬೈ ಇಂಡಿಯನ್ಸ್ ಮುಖಾಮುಖಿ

****************

ಡಾ.ರಾಮ್ ಮನೋಹರ್ ಲೋಹಿಯಾ ಅವರ ಜನ್ಮ ದಿನವಾದ ಇಂದು ಅವರಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಗೌರವ ನಮನ ಸಲ್ಲಿಸಿದ್ದಾರೆ.

ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ಡಾ.ರಾಮ್ ಮನೋಹರ್ ಲೋಹಿಯಾ ಅವರು ಒಬ್ಬ ದಾರ್ಶನಿಕ ನಾಯಕ, ಸ್ವಾತಂತ್ರ್ಯ ಹೋರಾಟಗಾರ ಮತ್ತು ಸಾಮಾಜಿಕ ನ್ಯಾಯದ ಹರಿಕಾರರಾಗಿದ್ದರು. ಸಮಾಜದ ದುರ್ಬಲ ವರ್ಗದ ಸಬಲೀಕರಣಕ್ಕೆ ತಮ್ಮ ಜೀವನವನ್ನು ಮುಡುಪಾಗಿಟ್ಟು, ಬಲಿಷ್ಠ ಭಾರತ ನಿರ್ಮಾಣದೆಡೆಗೆ ಅವರ ಕೊಡುಗೆ ಅಪಾರ ಎಂದು ಸ್ಮರಿಸಿದ್ದಾರೆ.

ಸ್ವಾತಂತ್ರ್ಯ ಹೋರಾಟಗಾರರಾದ ಭಗತ್ ಸಿಂಗ್, ಸುಖದೇವ್ ಮತ್ತು ರಾಜ್‌ಗುರು ಅವರ ಪುಣ್ಯ ಸ್ಮರಣೆ ದಿನವಾದ ಇಂದು ಅವರಿಗೆ ಪ್ರಧಾನಿ ನರೇಂದ್ರ ಮೋದಿ ಗೌರವ ಸಲ್ಲಿಸಿದ್ದಾರೆ.

ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ವೀಡಿಯೊವನ್ನು ಹಂಚಿಕೊಂಡಿರುವ ಅವರು, ಸ್ವಾತಂತ್ರ್ಯ ಮತ್ತು ನ್ಯಾಯಕ್ಕಾಗಿ ಅವರ ಕೊಡುಗೆ ಅಪಾರವಾಗಿದ್ದು, ಅವರ ತ್ಯಾಗಗಳು ನಮಗೆಲ್ಲರಿಗೂ ಸ್ಫೂರ್ತಿ ನೀಡುತ್ತಲೇ ಇರುತ್ತವೆ ಎಂದು ಹೇಳಿದ್ದಾರೆ.

****************

'ಫಿಟ್ ಇಂಡಿಯಾ' ಅಭಿಯಾನ ಯಶಸ್ವಿಗೊಳಿಸಲು ನಮ್ಮ ದೈನಂದಿನ ದಿನಚರಿಯಲ್ಲಿ ನಿಯಮಿತ ವ್ಯಾಯಾಮ ಮತ್ತು ಸೈಕ್ಲಿಂಗ್ ಸೇರಿಸಿಕೊಳ್ಳುವ ಅಗತ್ಯವಿದೆ ಎಂದು ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ.ಮನ್ಸೂಖ್ ಮಾಂಡವೀಯ ಹೇಳಿದ್ದಾರೆ.

ಲಖ್ನೋದಲ್ಲಿಂದು ಫಿಟ್ ಇಂಡಿಯಾ ಸಂಡೆ ಆನ್ ಸೈಕಲ್ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಸೈಕ್ಲಿಂಗ್ ಆರೋಗ್ಯಕರ ಜೀವನಶೈಲಿಯನ್ನು ಉತ್ತೇಜಿಸುವುದರ ಜೊತೆಗೆ ಪರಿಸರ ಸಂರಕ್ಷಣೆಯಲ್ಲೂ ಪಾತ್ರ ವಹಿಸುತ್ತದೆ. ಮಾನಸಿಕ ಹಾಗೂ ದೈಹಿಕ ಸದೃಢತೆಯನ್ನು ಸೈಕ್ಲಿಂಗ್ ಹೆಚ್ಚಿಸುತ್ತದೆ ಎಂದರು.

ಅಭಿಯಾನದ ಭಾಗವಾಗಿ ಸಚಿವರು 3 ಕಿಲೋಮೀಟರ್ ವರೆಗೆ ಸೈಕ್ಲಿಂಗ್ ಮಾಡಿದರು. ಇದೇ ವೇಳೆ ಸಚಿವರು, ಪ್ರತಿ ಭಾನುವಾರ ಕನಿಷ್ಠ 1 ಗಂಟೆ ಸೈಕ್ಲಿಂಗ್‌ನಲ್ಲಿ ತೊಡಗಿ ಆರೋಗ್ಯ ಕರ ಜೀವನ ರೂಪಿಸಿಕೊಳ್ಳಲು ಜನರಿಗೆ ಕರೆ ನೀಡಿದ್ದಾರೆ.

ಧ್ವನಿ: ಮನ್ಸೂಖ್ ಮಾಂಡವೀಯ, ಕೇಂದ್ರ ಸಚಿವ

ಕಾರ್ಯಕ್ರಮದಲ್ಲಿ ಉತ್ತರಪ್ರದೇಶದ ಕ್ರೀಡಾ ಸಚಿವ ಗಿರಿಶ್‌ಚಂದ್ರ ಯಾದವ್ ಉಪಸ್ಥಿತರಿದ್ದರು. 400 ಕ್ಕೂ ಹೆಚ್ಚು ಉತ್ಸಾಹಿ ಸೈಕಲ್ ಸವಾರರು ಅಭಿಯಾನದಲ್ಲಿ ಪಾಲ್ಗೊಂಡು, ಆರೋಗ್ಯಕರ ಹಾಗೂ ಸಕ್ರಿಯ ಜೀವನಶೈಲಿ ನಡೆಸುವ ಪ್ರಧಾನಿ ನರೇಂದ್ರ ಮೋದಿ ಅವರ ಸಂದೇಶವನ್ನು ಮತ್ತಷ್ಟು ಜನರಿಗೆ ತಲುಪಿಸುವ ಪ್ರತಿಜ್ಞೆ ಮಾಡಿದರು. ಇಲ್ಲಿಯವರೆಗೆ ದೇಶಾದ್ಯಂತ ಇಂತಹ ಸೈಕ್ಲಿಂಗ್ ಅಭಿಯಾನಗಳನ್ನು 4 ಸಾವಿರದ 200 ಕ್ಕೂ ಹೆಚ್ಚು ಸ್ಥಳಗಳಲ್ಲಿ ಸುಮಾರು 2 ಲಕ್ಷ ಜನರ ಭಾಗವಹಿಸುವಿಕೆಯೊಂದಿಗೆ ಆಯೋಜಿಸಲಾಗಿದೆ.

****************

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ- ಎನ್‌ಟಿಎ ಸಾಮಾನ್ಯ ವಿಶ್ವವಿದ್ಯಾಲಯ ಪ್ರವೇಶ ಪರೀಕ್ಷೆ ಸಿಯುಇಟಿ-ಯುಜಿ 2025 ರ ನೋಂದಣಿ ಅವಧಿಯನ್ನು ವಿಸ್ತರಿಸಲಾಗಿದೆ.

ಅಭ್ಯರ್ಥಿಗಳು ತಮ್ಮ ಆನ್‌ಲೈನ್ ಅರ್ಜಿಗಳನ್ನು ನಾಳೆಯೊಳಗೆ ಸಲ್ಲಿಸಬಹುದಾಗಿದೆ. ಶುಲ್ಕ ಪಾವತಿಗೆ ಇದೇ 25 ರ ರಾತ್ರಿ 11.50 ರವರೆಗೆ ಅವಕಾಶವಿದೆ. ಅರ್ಜಿ ತಿದ್ದುಪಡಿಗಳಿಗೆ ಇದೇ 28ರವರೆಗೆ ಅವಕಾಶ ಕಲ್ಪಿಸಲಾಗಿದೆ. ಕೇಂದ್ರ, ರಾಜ್ಯ, ಖಾಸಗಿ, ಡೀಮ್ಡ್ ಮತ್ತು ಸರ್ಕಾರಿ ಸಂಸ್ಥೆಗಳು ನೀಡುವ ಪದವಿ ಕೋರ್ಸ್‌ಗಳಿಗೆ ಪ್ರವೇಶ ಬಯಸುವ ಅಭ್ಯರ್ಥಿಗಳು ಸಿಯುಇಟಿ.ಎನ್‌ಟಿಎ.ಎನ್‌ಐಸಿ.ಇನ್ ನಲ್ಲಿ ಆನ್‌ಲೈನ್ ಅರ್ಜಿಯನ್ನು ಭರ್ತಿ ಮಾಡಬಹುದಾಗಿದೆ.

ಸಿಯುಇಟಿ-ಯುಜಿ 2025 ಪರೀಕ್ಷೆಯನ್ನು ಮೇ 8 ರಿಂದ ಜೂನ್ 1ರವರೆಗೆ ನಡೆಸಲು ತಾತ್ಕಾಲಿಕವಾಗಿ ನಿರ್ಧರಿಸಲಾಗಿದೆ.

****************

ಏಪ್ರಿಲ್ 1 ರಿಂದ ಜಾರಿಗೆ ಬರುವಂತೆ ಈರುಳ್ಳಿ ರಫ್ತಿನ ಮೇಲಿನ ಶೇಕಡ 20 ರಷ್ಟು ಸುಂಕವನ್ನು ಕೇಂದ್ರ ಸರ್ಕಾರ ರದ್ದುಗೊಳಿಸಿದೆ.

ಈರುಳ್ಳಿ ದರವನ್ನು ಕೈಗೆಟಕುವಂತೆ ಕಾಯ್ದುಕೊಳ್ಳುವುದರ ಜೊತೆಗೆ ರೈತರಿಗೆ ಲಾಭದಾಯಕ ಬೆಲೆಗಳನ್ನು ಖಚಿತಪಡಿಸಲು ಈ ನಿರ್ಧಾರ ಸಹಕಾರಿಯಾಗಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವಾಲಯ ತಿಳಿಸಿದೆ.

ಹಿಂಗಾರು ಬೆಳೆಗಳು ಉತ್ತಮ ಪ್ರಮಾಣದಲ್ಲಿ ಬೆಳೆಯುವ ನಿರೀಕ್ಷೆ ಇರುವುದರಿಂದ ಈಗಾಗಲೇ ಮಂಡಿ ಮತ್ತು ಚಿಲ್ಲರೆ ಅಂಗಡಿಗಳಲ್ಲಿ ಬೆಲೆ ಕುಸಿತ ಕಂಡು ಬಂದಿದೆ. ಹಿಂಗಾರು ಋತುವಿನಲ್ಲಿ ಈರುಳ್ಳಿ ಸೇರಿದಂತೆ ಇತರ ಬೆಳೆಗಳ ಹೆಚ್ಚಿನ ಉತ್ಪಾದನೆ, ಮುಂಬರುವ ತಿಂಗಳುಗಳಲ್ಲಿ ಮಾರುಕಟ್ಟೆ ಬೆಲೆಗಳನ್ನು ಮತ್ತಷ್ಟು ಕಡಿಮೆ ಮಾಡುವ ನಿರೀಕ್ಷೆಯಿದೆ ಎಂದು ಸಚಿವಾಲಯ ತಿಳಿಸಿದೆ.

ದೇಶೀಯ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ಕಳೆದ ವರ್ಷ ಸೆಪ್ಟಂಬರ್ 13 ರಿಂದ ಶೇಕಡ 20 ರಷ್ಟು ರಫ್ತು ಸುಂಕ ಜಾರಿಯಲ್ಲಿದೆ.

****************

ಚೆನ್ನೈನಲ್ಲಿ ವಿರೋಧ ಪಕ್ಷಗಳು ಸೇರಿ ನಡೆಸಿದ ಕ್ಷೇತ್ರ ಮರುವಿಂಗಡಣೆ ಕುರಿತ ಸಭೆಯನ್ನು ಕೇಂದ್ರ ಕಲ್ಲಿದ್ದಲು ಮತ್ತು ಗಣಿ ಸಚಿವ ಹಾಗೂ ತೆಲಂಗಾಣ ರಾಜ್ಯ ಬಿಜೆಪಿ ಅಧ್ಯಕ್ಷ ಜಿ.ಕಿಶನ್ ರೆಡ್ಡಿ ತಿರಸ್ಕರಿಸಿದ್ದಾರೆ.

ಇಂತಹ ಸಭೆಗಳು ಸಾರ್ವಜನಿಕರಲ್ಲಿ ಅನಗತ್ಯ ಭೀತಿ ಸೃಷ್ಟಿಸುವ ಗುರಿಯನ್ನು ಹೊಂದಿರುವ ಆಧಾರ ರಹಿತ ರಾಜಕೀಯ ತಂತ್ರವಾಗಿದೆ ಎಂದಿರುವ ಸಚಿವರು, ಕ್ಷೇತ್ರ ಮರುವಿಂಗಡಣೆ ಸಂಬಂಧಿಸಿದ ಕಾರ್ಯ ವಿಧಾನ ಹಾಗೂ ನಿಯಮಗಳನ್ನು ಇನ್ನೂ ಅಂತಿಮಗೊಳಿಸಲಾಗಿಲ್ಲ ಎಂದು ಕೇಂದ್ರ ಸರ್ಕಾರ ಈಗಾಗಲೇ ಸ್ಪಷ್ಟಪಡಿಸಿದೆ. ತಮ್ಮ ಪಕ್ಷದ ವಿರುದ್ಧ ಭ್ರಷ್ಟಾಚಾರದ ಆರೋಪಗಳಿಂದ ಜನರ ಗಮನವನ್ನು ಬೇರೆಡೆ ಸೆಳೆಯಲು ವಿರೋಧ ಪಕ್ಷಗಳು ಈ ರೀತಿ ತಪ್ಪು ಮಾಹಿತಿ ಹರುಡುತ್ತಿವೆ ಎಂದು ಆರೋಪಿಸಿದ್ದಾರೆ.

ತಮಿಳುನಾಡು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ಅಧ್ಯಕ್ಷತೆಯಲ್ಲಿ ಚೆನ್ನೈನಲ್ಲಿ ನಿನ್ನೆ ನ್ಯಾಯಯುತ ಕ್ಷೇತ್ರ ಮರುವಿಂಗಡಣೆ ಕುರಿತ ಮೊದಲ ಜಂಟಿ ಕ್ರಿಯಾ ಸಮಿತಿ ಸಭೆ ನಡೆದಿದ್ದು, ಸಭೆಯಲ್ಲಿ ಪಂಜಾಬ್ ಮುಖ್ಯಮಂತ್ರಿ ಭಗವಂತ್ ಸಿಂಗ್ ಮಾನ್, ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್, ತೆಲಂಗಾಣ ಮುಖ್ಯಮಂತ್ರಿ ರೇವಂತ ರೆಡ್ಡಿ, ಕರ್ನಾಟಕ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭಾಗವಹಿಸಿದ್ದರು.

****************

ಗಾಜಾದ ಖಾನ್ ಯೂನಿಸ್‌ನಲ್ಲಿ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ಹಮಾಸ್ ನಾಯಕ ಸಲಾಹ್ ಅಲ್ ಬರ್ದವೀಲ್ ಮೃತಪಟ್ಟಿರುವ ಕುರಿತು ವರದಿಯಾಗಿದೆ.

ಹಮಾಸ್ ಮತ್ತು ಪ್ಯಾಲಿಸ್ತೇನ್ ಮಾಧ್ಯಮಗಳ ವರದಿ ಪ್ರಕಾರ ಬರ್ದವೀಲ್‌ನನ್ನು ಗುರಿಯಾಗಿಸಿ ದಕ್ಷಿಣಾ ಗಾಜಾ ಪಟ್ಟಿಯಲ್ಲಿ ನಡೆಸದ ದಾಳಿಯಲ್ಲಿ ಹಮಾಸ್ ನಾಯಕ ತನ್ನ ಪತ್ನಿಯೊಂದಿಗೆ ಸಾವನ್ನಪ್ಪಿದ್ದಾರೆ. ಈ ನಡುವೆ ನಿನ್ನೆ ಬೆಳಗ್ಗೆಯಿಂದ ನಡೆದ ಇಸ್ರೇಲಿ ವೈಮಾನಿಕ ದಾಳಿಯಲ್ಲಿ ಸುಮಾರು 32 ಪ್ಯಾಲಿಸ್ತೇನಿಯನ್ನರು ಮೃತಪಟ್ಟಿದ್ದಾರೆ.

ಹಮಾಸ್ ಹಾಗೂ ಇಸ್ರೇಲ್ ನಡುವಿನ ಕದನ ವಿರಾಮ ಒಪ್ಪಂದ ಮುರಿದುಬಿದ್ದ ನಂತರ ಇಸ್ರೇಲ್ ಗಾಜಾ ಮೇಲಿನ ದಾಳಿಯನ್ನು ಪುನರಾಂಭಿಸಿದ್ದು, ಹಲವಾರು ಉನ್ನತಮಟ್ಟದ ಹಮಾಸ್ ಅಧಿಕಾರಿಗಳನ್ನು ಹತ್ಯೆ ಮಾಡಿದೆ.

****************

ಭಾರತೀಯ ಬ್ಯಾಸ್ಕೆಟ್ ಬಾಲ್ ತಂಡ, ಫಿಬಾ ಪುರುಷರ ಏಷ್ಯಾಕಪ್–2025ಕ್ಕೆ ಅರ್ಹತೆ ಗಳಿಸಿದೆ.

ಮನಾಮಾದ ಖಲಿಫಾ ಸ್ಪೋರ್ಟ್ಸ್ ಸಿಟಿಯಲ್ಲಿ ನಿನ್ನೆ ನಡೆದ ಬ್ಯಾಸ್ಕೆಟ್ ಬಾಲ್ ಪಂದ್ಯದಲ್ಲಿ ಭಾರತೀಯ ತಂಡ ಬಹ್ರೇನ್ ವಿರುದ್ಧ 81–77 ಅಂಕಗಳ ಅಂತರದಲ್ಲಿ ಗೆಲುವು ಸಾಧಿಸಿ ಪ್ರತಿಷ್ಠಿತ ಫಿಬಾ ಏಷ್ಯಾಕಪ್‌ಗೆ ಅರ್ಹತೆ ಗಳಿಸಿದೆ.

ಆಗಸ್ಟ್ 5 ರಿಂದ 17ರವರೆಗೆ ನಡೆಯಲಿರುವ ಫಿಬಾ ಪುರುಷರ ಏಷ್ಯಾಕಪ್ ಬ್ಯಾಸ್ಕೆಟ್ ಬಾಲ್ ಪಂದ್ಯಾವಳಿಗೆ ಭಾರತ ಸೌದಿಅರೇಬಿಯಾದ ಜದ್ದಾಗೆ ಪ್ರಯಾಣ ಬೆಳೆಸಲಿದೆ.

****************

ಇಂಡಿಯನ್ ಪ್ರೀಮಿಯರ್ ಲೀಗ್–ಐಪಿಎಲ್ ಟಿ–20 ಕ್ರಿಕೆಟ್ ಪಂದ್ಯಾವಳಿಯಲ್ಲಿಂದು 2 ಪಂದ್ಯಗಳು ನಡೆಯಲಿದ್ದು, ಹೈದರಾಬಾದ್‌ನ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯಲಿರುವ ಮೊದಲ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ಹಾಗೂ ರಾಜಸ್ಥಾನ ರಾಯಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಅಪರಾಹ್ನ 3.30 ಕ್ಕೆ ಆರಂಭವಾಗಲಿದೆ.

ಎರಡನೇ ಪಂದ್ಯ ಚೆನ್ನೈ ಸೂಪರ್ ಕಿಂಗ್ಸ್ ಹಾಗೂ ಮುಂಬೈ ಇಂಡಿಯನ್ಸ್ ನಡುವೆ ಚೆನ್ನೈ ಎಂ.ಎ.ಚಿದಂಬರಂ ಕ್ರೀಡಾಂಗಣದಲ್ಲಿ ನಡೆಯಲಿದ್ದು, ಪಂದ್ಯ ರಾತ್ರಿ 7.30 ಕ್ಕೆ ಪ್ರಾರಂಭವಾಗಲಿದೆ.

ಕೊಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ನಿನ್ನೆ ನಡೆದ ಉದ್ಘಾಟನಾ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ, ಕೋಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ 7 ವಿಕೆಟ್‌ಗಳ ಭರ್ಜರಿ ಜಯ ದಾಖಲಿಸಿದೆ.

****************

ಅಮೆರಿಕದ ಫ್ಲೋರಿಡಾದಲ್ಲಿ ನಡೆಯುತ್ತಿರುವ ಮಿಯಾಮಿ ಓಪನ್ ಟೆನಿಸ್‌ನ ಪುರುಷರ ಡಬಲ್ಸ್‌ನಲ್ಲಿ ಭಾರತದ ಯೂಕಿ ಭಾಂಬ್ರಿ ಮತ್ತು ಅವರ ಸಹ ಆಟಗಾರ ಪೋರ್ಚುಗೀಸ್‌ನ ನುನೊ ಬೋರ್ಗೆಸ್ ಪ್ರವೇಶಿಸಿದ್ದಾರೆ.

ಇಂದು ನಡೆದ 32 ರ ಸುತ್ತಿನ ಪಂದ್ಯದಲ್ಲಿ ಭಾಂಬ್ರಿ ಮತ್ತು ಬೋರ್ಗೆಸ್ ಜೋಡಿ, ಭಾರತದ ಅನುಭವಿ ಟೆನಿಸ್ ಆಟಗಾರ ರೋಹನ್ ಬೋಪಣ್ಣ ಮತ್ತು ಕ್ರೊಯೇಷಿಯಾದ ಇವಾನ್ ಡೋಡಿಗ್ ಜೋಡಿಯನ್ನು, 6-4, 3-6, 10-7 ಸೆಟ್‌ಗಳಿಂದ ಪರಾಭವಗೊಳಿಸಿತು.

ಭಾರತ-ಪೋರ್ಚುಗೀಸ್ ಜೋಡಿಯು ನಾಳೆ ನಡೆಯಲಿರುವ ಪ್ರಿ-ಕ್ವಾರ್ಟರ್ ಫೈನಲ್‌ನಲ್ಲಿ ಜೆಕಿಯಾದ ಆಡಮ್ ಪಾವ್ಲಾಸೆಕ್ ಮತ್ತು ಬ್ರಿಟನ್‌ನ ಜೇಮಿ ಮುರ್ರೆ ಅವರನ್ನು ಎದುರಿಸಲಿದೆ.

****************

ಟರ್ಕಿಯ ಅಂಟಲ್ಯದಲ್ಲಿ ನಡೆದ ಫೆಡರೇಷನ್ ಇಂಟರ್ನ್ಯಾಷನಲ್ ಡಿ ಜಿಮ್ನಾಸ್ಟಿಕ್- ಎಫ್‌ಐಜಿ ವಿಶ್ವಕಪ್‌ನಲ್ಲಿ ಭಾರತದ ಪ್ರಣತಿ ನಾಯಕ್ ಮಹಿಳಾ ವಾಲ್ಟ್ ಫೈನಲ್‌ನಲ್ಲಿ ಕಂಚಿನ ಪದಕವನ್ನು ಗೆದ್ದಿದ್ದಾರೆ.

********ಮುಕ್ತಾಯ********